**All India Radio: Bangalore**
**National Bulletin In Kannada**
**07.10.2026   7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**07.10.2026  7.35 am**

**<>><><*><><<>**

ಮುಖ್ಯಾಂಶಗಳು

೧. ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರೈಸಿದ ಪ್ರಧಾನಿ ನರೇಂದ್ರ ಮೋದಿ; ದೇಶಾದ್ಯಂತ ವಿಶೇಷ ಕಾರ್ಯಕ್ರಮ

೨. ತಂತ್ರಜ್ಞಾನ, ಸರ್ವವ್ಯಾಪಿ ಮತ್ತು ಸುಸ್ಥಿರ ಅಭಿವೃದ್ಧಿಯ ಮಾಧ್ಯಮವಾಗಬೇಕು- ಪ್ರಧಾನಿ ನರೇಂದ್ರ ಮೋದಿ

೩. ವಿಬಿ ಜಿ ರಾಮ್ ಜಿ ಕಾಯ್ದೆ-೨೦೨೫; ಕೇಂದ್ರ ಸರ್ಕಾರದಿಂದ ಅನುಮತಿಸಲಾದ ಕಾಮಗಾರಿಗಳ ಪಟ್ಟಿ ಪ್ರಕಟ

೪. ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿ; ಮೊದಲನೇ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಭಾರತಕ್ಕೆ ೮ ವಿಕೆಟ್ ಜಯ

೫. ಚೀನಾ ಓಪನ್ ಟೆನಿಸ್; ದಾಖಲೆಯ ಏಳನೇ ಬಾರಿ ಪ್ರಶಸ್ತಿ ಮುಡಿಗೇರಿಸಿಕೊಂಡ ಸರ್ಬಿಯಾದ ನೋವಾಕ್ ಜೋಕೊವಿಚ್

**<>><><*><><<>**

ಸಾರ್ವಜನಿಕ ಸೇವೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಇಂದಿಗೆ ೨೫ ವರ್ಷಗಳನ್ನು ಪೂರೈಸುತ್ತಿದ್ದಾರೆ. ೨೦೦೧ರ ಅಕ್ಟೋಬರ್ ೭ ರಂದು ಮೊದಲ ಬಾರಿಗೆ ಗುಜರಾತ್ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡಿದ್ದ ನರೇಂದ್ರ ಮೋದಿ ಅವರು, ೨೦೧೪ರಲ್ಲಿ ಪ್ರಧಾನಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದರು. ವಿಶೇಷವಾಗಿ ಪ್ರಧಾನಿ ನರೇಂದ್ರ ಮೋದಿ ಅವರ ೨೫ ವರ್ಷಗಳ ಆಡಳಿತಾವಧಿಯಲ್ಲಿ ಸಮಪಾಲಿನಂತೆ ಅವರು ಮೊದಲ ಹನ್ನೆರಡುವರೆ ವರ್ಷ ಮುಖ್ಯಮಂತ್ರಿಯಾಗಿ ಹಾಗೂ ನಂತರದ ಹನ್ನೆರಡುವರೆ ವರ್ಷ ಪ್ರಧಾನಿಯಾಗಿ ಸೇವೆ ಸಲ್ಲಿಸಿದ್ದು, ಅಂದಿನಿಂದ ಇಂದಿನವರೆಗೂ ಸೇವಾ ನಿಷ್ಠೆ ಹಾಗೂ ಅಚಲ ಬದ್ಧತೆಯೊಂದಿಗೆ ಜನ ಸೇವೆಯಲ್ಲಿ ತೊಡಗಿದ್ದಾರೆ.

**<>><><*><><<>**

ಸಾರ್ವಜನಿಕ ಸೇವೆಯಲ್ಲಿ ಸತತ ೨೫ ವರ್ಷಗಳನ್ನು ಪೂರೈಸಿದ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕೇಂದ್ರ ಸಚಿವ ಸಂಪುಟ ನಿರ್ಣಯ ಅಂಗೀಕರಿಸುವ ಮೂಲಕ ಅಭಿನಂದನೆ ಸಲ್ಲಿಸಿದೆ. ನಿನ್ನೆ ಸಭೆಯ ಬಳಿಕ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಪ್ರಧಾನಿ ನರೇಂದ್ರ ಮೋದಿ ಅವರ ಈ ೨೫ ವರ್ಷಗಳ ಸುದೀರ್ಘ ಆಡಳಿತಾವಧಿ ಭಾರತೀಯ ಪ್ರಜಾಪ್ರಭುತ್ವದ ಶಕ್ತಿ ಮತ್ತು ಪ್ರಬುದ್ಧತೆಗೆ ಸಾಕ್ಷಿಯಾಗಿದೆ ಎಂದು ತಿಳಿಸಿದರು.

**<>><><*><><<>**

ಇಂಡಿಯಾ ಮೊಬೈಲ್ ಕಾಂಗ್ರೆಸ್ ಕಾರ್ಯಕ್ರಮಕ್ಕೂ ಪೂರ್ವಭಾವಿಯಾಗಿ, ನವದೆಹಲಿಯ ಸೇವಾ ತೀರ್ಥದಲ್ಲಿ ಗ್ಲೋಬಲ್ ಸಿಸ್ಟಮ್ ಫಾರ್ ಮೊಬೈಲ್ ಕಮ್ಯುನಿಕೇಷನ್ಸ್ ಅಸೋಸಿಯೇಷನ್ ಆಡಳಿತ ಮಂಡಳಿಯ ಸದಸ್ಯರೊಂದಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸಂವಾದ ನಡೆಸಿದರು. ಈ ವೇಳೆ ಮಾತನಾಡಿದ ಪ್ರಧಾನಿ, ಸಮಾಜದ ಯಾವುದೇ ವರ್ಗವೂ ಅಭಿವೃದ್ಧಿಯಿಂದ ವಂಚಿತವಾಗದಂತೆ ನೋಡಿಕೊಳ್ಳಲು ತಂತ್ರಜ್ಞಾನದ ಪ್ರಜಾಪ್ರಭುತ್ವೀಕರಣ ಅತ್ಯಗತ್ಯ ಎಂದು ಪ್ರತಿಪಾದಿಸಿದರು. ವಿಶೇಷವಾಗಿ ಜಾಗತಿಕ ದಕ್ಷಿಣ ರಾಷ್ಟ್ರಗಳಿಗೆ ತಂತ್ರಜ್ಞಾನ ಮತ್ತು ಡಿಜಿಟಲ್ ಸೇವೆಗಳು ಸುಲಭವಾಗಿ ಹಾಗೂ ಕಡಿಮೆ ವೆಚ್ಚದಲ್ಲಿ ಸಿಗುವಂತಾಗಬೇಕು. ಡಿಜಿಟಲ್ ಅಭಿವೃದ್ಧಿಯ ಅಂತರವನ್ನು ತಡೆಯಲು

ತಂತ್ರಜ್ಞಾನವನ್ನು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಿಸುವ ಅಗತ್ಯವಿದೆ ಎಂದರು. ಇದೇ ವೇಳೆ, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಅಭಿವೃದ್ಧಿಶೀಲ ದೇಶಗಳ ಪ್ರಗತಿಗೆ ಪೂರಕವಾಗಿ ಪ್ರಮುಖ ಪರಿವರ್ತನಾ ಶಕ್ತಿಯಾಗಿ ಹೊರಹೊಮ್ಮಿದೆ ಎಂದು ಪ್ರಧಾನಿ ಬಣ್ಣಿಸಿದರು. ದೆಹಲಿಯಲ್ಲಿ ಇಂದಿನಿಂದ ಇದೇ ೧೦ ರವರೆಗೆ ಇಂಡಿಯಾ ಮೊಬೈಲ್ ಕಾಂಗ್ರೆಸ್ ನಡೆಯಲಿದೆ.

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರು ಸಾರ್ವಜನಿಕ ಜೀವನದಲ್ಲಿ ೨೫ ವರ್ಷಗಳನ್ನು ಪೂರೈಸುತ್ತಿರುವ ಹಿನ್ನೆಲೆಯಲ್ಲಿ, ಪ್ರಧಾನಿ ನರೇಂದ್ರ ಮೋದಿ ಮತ್ತು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಇಂದು 'ವಿಕಸಿತ ಭಾರತ ಸಂಕಲ್ಪ ಸಭೆ'ಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಪ್ರಧಾನಿ ಮತ್ತು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರ ಭಾಷಣಗಳ ಜೊತೆಗೆ, ಪಕ್ಷದ ಹಲವಾರು ಹಿರಿಯ ನಾಯಕರು ಉತ್ತರ ಪ್ರದೇಶದ ವಿವಿಧ ಭಾಗಗಳಿಂದ ವರ್ಚುವಲ್ ಮೂಲಕ ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

<>><><*><><<>

'ಜನ ಸೇವೆಯಿಂದ ದೇಶ ಸೇವೆ' ಎಂಬ ಮಂತ್ರದಡಿ ಹಾಗೂ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ ಕೂಡಿರುವ ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ.s ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ.  ಇಂದಿನ ಆವೃತ್ತಿಯಲ್ಲಿ 'ಅಯೋಧ್ಯೆ ರಾಮಮಂದಿರ; ನಾಗರಿಕತೆಯ ಜಾಗೃತಿಯ ಪುನರುತ್ಥಾನ' ಕುರಿತ ಒಂದು ವರದಿ ಇಲ್ಲಿದೆ. ಐದು ಶತಮಾನಗಳ ಸುದೀರ್ಘ ಕಾಯುವಿಕೆಯ ನಂತರ ಅಯೋಧ್ಯೆಯ ಶ್ರೀರಾಮ ಜನ್ಮಭೂಮಿಯಲ್ಲಿ ರಾಮಮಂದಿರ ನಿರ್ಮಾಣಗೊಳ್ಳುವ ಮೂಲಕ ಕೋಟ್ಯಂತರ ಜನರ ಕನಸು ನನಸಾಗಿದೆ. ಶತಮಾನಗಳಿಂದ ಪೀಳಿಗೆಯಿಂದ ಪೀಳಿಗೆಗೆ ಹರಿದು ಬಂದ ಈ ಆಶಯ, ಸುಮಾರು ೭೦ ವರ್ಷಗಳ ಕಾಲ ನ್ಯಾಯಾಲಯದಲ್ಲಿ ಇತ್ಯರ್ಥವಾಗದೇ ಉಳಿದಿತ್ತು. ಸರ್ಕಾರ ಈ ಸೂಕ್ಷ್ಮ ವಿಷಯವನ್ನು ಅತ್ಯಂತ ಯೋಜನಾ ಬದ್ಧವಾಗಿ ನಿರ್ವಹಿಸಿ, ಸೌಹಾದಯುತ ವಾತಾವರಣ ನಿರ್ಮಿಸಿ, ಶಾಂತಿ ಕಾಪಾಡಲು ಎಲ್ಲಾ ಪಾಲುದಾರರಲ್ಲೂ ಮನವಿ ಮಾಡಿತು. ಪರಿಣಾಮವಾಗಿ ನವೆಂಬರ್ ೨೦೧೯ರಲ್ಲಿ ಸುಪ್ರೀಂಕೋರ್ಟ್ ಸರ್ವಾನುಮತದ ತೀರ್ಪು ನೀಡಿ, ರಾಮಮಂದಿರ ನಿರ್ಮಾಣಕ್ಕೆ ಜಾಗವನ್ನು ಮೀಸಲಿಟ್ಟಿತು. ದೇಶಾದ್ಯಂತ ಈ ತೀರ್ಪನ್ನು ಶಾಂತಿಯುತವಾಗಿ ಸ್ವೀಕರಿಸಲಾಯಿತು. ೨೦೨೪ರ ಜನವರಿ ೨೨ ರಂದು ಪ್ರಾಣಪ್ರತಿಷ್ಠಾಪನೆ ನೆರವೇರಿತು ಹಾಗೂ ೨೦೨೫ರ ನವೆಂಬರ್‌ನಲ್ಲಿ ನೆರವೇರಿದ ಧ್ವಜಾರೋಹಣದೊಂದಿಗೆ ಮಂದಿರದ ಸಂಪೂರ್ಣ ನಿರ್ಮಾಣ ಕಾರ್ಯ ಮುಕ್ತಾಯಗೊಂಡಿತು. ೫೦೦ ವರ್ಷಗಳ ಬಳಿಕ ಅಯೋಧ್ಯೆಯ ಪವಿತ್ರ ಭೂಮಿಯಲ್ಲಿ ಭಾರತೀಯ ಸಂಸ್ಕೃತಿ ಮತ್ತು ನಾಗರಿಕತೆ ತನ್ನ ಶಾಶ್ವತ ನೆಲೆಯನ್ನು ಕಂಡುಕೊಂಡಿದೆ.

<>><><*><><<>

'ವಿಬಿ ಜಿ ರಾಮ್ ಜಿ ಕಾಯ್ದೆ, ೨೦೨೫' ರ ಅಡಿಯಲ್ಲಿ ಅನುಮತಿಸಲಾದ ಕಾಮಗಾರಿಗಳ ಪಟ್ಟಿಯನ್ನು ಕೇಂದ್ರ ಸರ್ಕಾರ ಪ್ರಕಟಿಸಿದೆ. ಇದು ಹೊಸ ಗ್ರಾಮೀಣ ಕಾಮಗಾರಿ ಚೌಕಟ್ಟಿನಡಿಯಲ್ಲಿ ೩೭೫ ಅನುಮತಿಸಲಾದ ಕಾಮಗಾರಿಗಳಿಗೆ ಅವಕಾಶ ನೀಡುತ್ತದೆ.  ಹೊಸ ಕಾಮಗಾರಿಗಳ ಪಟ್ಟಿಯು, ಹಿಂದಿನ ಕಾಮಗಾರಿ ಚೌಕಟ್ಟಿನಡಿಯಲ್ಲಿ ೨೬೬ ಕಾಮಗಾರಿಗಳಿಗಿಂತ ಶೇಕಡಾ ೪೧ ರಷ್ಟು ವಿಸ್ತರಣೆಯಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವಾಲಯ ತಿಳಿಸಿದೆ. ಜಲ ಭದ್ರತೆ, ಪ್ರಮುಖ ಗ್ರಾಮೀಣ ಮೂಲಸೌಕರ್ಯ, ಜೀವನೋಪಾಯಕ್ಕೆ ಸಂಬಂಧಿಸಿದ ಮೂಲಸೌಕರ್ಯ ಮತ್ತು ತೀವ್ರ ಹವಾಮಾನ ಘಟನೆಗಳು ಮತ್ತು ವಿಪತ್ತು ಸಿದ್ಧತೆಗಾಗಿ ವಿಶೇಷ ಕಾಮಗಾರಿಗಳು ಸೇರಿದಂತೆ ನಾಲ್ಕು ವಿಷಯಾಧಾರಿತ ಸ್ತಂಭಗಳ ಆಧಾರದ ಮೇಲೆ ಕಾಮಗಾರಿಗಳನ್ನು ಮರುಸಂಘಟಿಸಲಾಗಿದೆ. ಜಲ ಭದ್ರತಾ ವಿಷಯ, ೧೨೮ ಕಾಮಗಾರಿಗಳನ್ನು ಒಳಗೊಂಡಿದೆ. ಗ್ರಾಮೀಣ ಪ್ರದೇಶಗಳಲ್ಲಿ ಅಗತ್ಯ ನಾಗರಿಕ ಮತ್ತು ಸಮುದಾಯ ಮೂಲಸೌಕರ್ಯವನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ೧೧೧ ಕಾಮಗಾರಿಗಳನ್ನು ಗ್ರಾಮೀಣ ಮೂಲಸೌಕರ್ಯ ವಿಷಯ ಒಳಗೊಂಡಿದೆ. ಹೊಸ ಪಟ್ಟಿಯು ಜೀವನೋಪಾಯಕ್ಕೆ ಸಂಬಂಧಿಸಿದ ಮೂಲಸೌಕರ್ಯಕ್ಕೆ ಹೆಚ್ಚಿನ ಒತ್ತು ನೀಡುತ್ತದೆ, ವಿಪತ್ತು ಸನ್ನದ್ಧತೆ ಮತ್ತು ಹವಾಮಾನ ವೈಪರೀತ್ಯಗಳಿಗೆ ಮೀಸಲಾದ ವರ್ಗವನ್ನು ಮೊದಲ ಬಾರಿಗೆ ಗ್ರಾಮೀಣ ಕಾಮಗಾರಿ ಚೌಕಟ್ಟಿನಲ್ಲಿ ಸೇರಿಸಲಾಗಿದೆ, ಇದರಲ್ಲಿ ೩೮ ಕಾಮಗಾರಿಗಳಿವೆ.

<>><><*><><<>

ಉತ್ತರಪ್ರದೇಶದ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ವೆಸ್ಟ್ ಇಂಡೀಸ್ ವಿರುದ್ಧದ ೫ ಪಂದ್ಯಗಳ ಟಿ-೨೦ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿ ಭಾರತ ೮ ವಿಕೆಟ್‌ಗಳ ಜಯ ಸಾಧಿಸಿ ಸರಣಿಯಲ್ಲಿ ೧-೦ ಅಂತರದಲ್ಲಿ ಮುನ್ನಡೆ ಸಾಧಿಸಿದೆ. ಮೊದಲು ಬ್ಯಾಟ್ ಮಾಡಿದ ವೆಸ್ಟ್ ಇಂಡೀಸ್ ೧೯.೧ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೧೬೧ ರನ್ ಗಳಿಸಿತು.

ವೆಸ್ಟ್ ಇಂಡೀಸ್ ಪರ ಶೆರ್ಫಾನೆ ರುದರ್‌ಫೋರ್ಡ್ ೫೬ ಹಾಗೂ ಶಾಯ್ ಹೋಪ್ ೫೨ ರನ್ ಗಳಿಸಿದರು. ಭಾರತದ ಪರ ನಮನ್ ಧೀರ್ ೩, ಅಕ್ಸರ್ ಪಟೇಲ್ ಹಾಗೂ ಕುಲ್ದೀಪ್ ಯಾದವ್ ತಲಾ ೨ ವಿಕೆಟ್ ಪಡೆದರು. ೧೬೨ ರನ್ ಗಳ ಗುರಿ ಬೆನ್ನತ್ತಿದ ಭಾರತ ತಂಡ, ನಾಯಕ ಶ್ರೇಯಸ್ ಅಯ್ಯರ್ ಅವರ ಆಕರ್ಷಕ ಶತಕದ ನೆರವಿನಿಂದ ೧೪.೪ ಓವರ್‌ಗಳಲ್ಲಿ ೨ ವಿಕೆಟ್ ಕಳೆದುಕೊಂಡು  ಗೆಲುವು ಸಾಧಿಸಿತು. ಸರಣಿಯ ೨ನೇ ಪಂದ್ಯ ಇದೇ ೯ ರಂದು ರಾಂಚಿಯಲ್ಲಿ ನಡೆಯಲಿದೆ.

<>><><*><><<>

ಚೀನಾದ ಬೀಜಿಂಗ್‌ನಲ್ಲಿ ನಡೆದ ಚೀನಾ ಓಪನ್ ಟೆನಿಸ್ ಟೂರ್ನಿಯ ಪುರುಷರ ಸಿಂಗಲ್ಸ್ ಪ್ರಶಸ್ತಿಯನ್ನು ಸರ್ಬಿಯಾದ ತಾರಾ ಟೆನಿಸ್ ಆಟಗಾರ ನೋವಾಕ್ ಜೋಕೊವಿಚ್ ದಾಖಲೆಯ ಏಳನೇ ಬಾರಿ ಮುಡಿಗೇರಿಸಿಕೊಂಡಿದ್ದಾರೆ. ನಿನ್ನೆ ನಡೆದ ಫೈನಲ್‌ನಲ್ಲಿ ಆಸ್ಟ್ರೇಲಿಯಾದ ಡಿ ಮಿನಾರ್ ವಿರುದ್ಧ ಜೋಕೊವಿಚ್ ಮೊದಲ ಸೆಟ್‌ನಲ್ಲಿ ಗೆಲುವು ದಾಖಲಿಸಿದ್ದರು. ಬಳಿಕ ನಡೆದ ಎರಡನೇ ಸೆಟ್‌ನ ಮೊದಲನೇ ಸುತ್ತಿನಲ್ಲಿ ಗೆಲುವು ದಾಖಲಿಸಿದ ಡಿ ಮಿನಾರ್ ಗಾಯದ ಬೆನ್ನಲ್ಲೇ ಪಂದ್ಯದಿಂದ ಹಿಂದೆ ಸರಿದರು. ಈ ಪ್ರಶಸ್ತಿ ಜಯಿಸಿದ ಜೋಕೊವಿಚ್‌ಗೆ ಇದು ವೃತ್ತಿಜೀವನದ ೧೦೨ನೇ ಟೂರ್ ಸ್ತರದ ಪ್ರಶಸ್ತಿಯಾಗಿದೆ.

<>><><*><><<>

ಭಾರತೀಯ ಸೇನೆ ಮತ್ತು ಕಝಾಕಿಸ್ತಾನ್ ಸಶಸ್ತ್ರ ಪಡೆಗಳು ಕಝಾಕಿಸ್ತಾನ್‌ನ ಒಸ್ಕೆಮೆನ್‌ನಲ್ಲಿ 'ಕಾಝಿಂಡ್ ೨೦೨೬' ಎಂಬ ಜಂಟಿ ಮಿಲಿಟರಿ ಸಮರಾಭ್ಯಾಸ ನಡೆಸಿವೆ.  ಇದರ ಭಾಗವಾಗಿ ಯುದ್ಧ ಕೌಶಲ್ಯಗಳನ್ನು ಹೆಚ್ಚಿಸುವ, ಪರಸ್ಪರ ಕಾರ್ಯಾಚರಣೆಯ ಸಾಮರ್ಥ್ಯವನ್ನು ವೃದ್ಧಿಸುವ ಮತ್ತು ಕಾರ್ಯಾಚರಣೆಯ ಸನ್ನದ್ಧತೆಯನ್ನು ಬಲಪಡಿಸುವ ಗುರಿಯೊಂದಿಗೆ ಯುದ್ಧ ತರಬೇತಿ ಅಭ್ಯಾಸಗಳನ್ನು ನಡೆಸಲಾಗಿದೆ.  ಇದರ ಮೂಲಕ ಎರಡೂ ಪಡೆಗಳ ನಡುವೆ ಯುದ್ಧ ಕೌಶಲ್ಯಗಳು, ಸಮನ್ವಯ ಮತ್ತು ಪರಸ್ಪರ ಕಾರ್ಯಾಚರಣೆಯ ಸಾಮರ್ಥ್ಯ ವೃದ್ಧಿಯಾಗಲಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ  ><><<>